**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ: 175/2021**

ಚಾಸಾ: 1 ಪ್ರಾಸಾ:1

| | | |
|---|---|---|
| ಹೆಸರು | : | ಕಮಲಮ್ಮ |
| ಗಂಡನ/ತಂದೆಯ ಹೆಸರು | : | ಸಿದ್ದರಾಜು |
| ವಯಸ್ಸು | : | 55 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಗುಡಿಸರಗೂರು ಗ್ರಾಮ |

**ದಿನಾಂಕ 27.02.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆ: ಮಾನ್ಯ ಎಪಿಪಿ ಯವರಿಂದ:**

ಆರೋಪಿ **1** ನನ್ನ ಮೈದ. ಆರೋಪಿ **2** ನನ್ನ ವರಗಿತಿ. ಆರೋಪಿ **3** ಮತ್ತು **4** ನನ್ನ ಮೈದನ ಮಕ್ಕಳು.

ಆರೋಪಿತರಿಗೂ ಮತ್ತು ನನಗೂ ಬಾಯಿಮಾತಿನ ಜಗಳ ಆಗಿರುತ್ತದೆ. ಆರೋಪಿತರು ನನಗೆ ಅವಾಚ್ಯ ಶಬ್ದದಿಂದ ನಿಂದಿಸಿಲ್ಲ, ನನ್ನ ಮೇಲೆ ಹಲ್ಲೆ ಮಾಡಿಲ್ಲ, ಪ್ರಾಣ ಬೆದರಿಕೆ ಹಾಕಿಲ್ಲ, ಈ ಬಗ್ಗೆ ನಾನು ಪೋಲಿಸರಿಗೆ ದೂರು ನೀಡಿರುತ್ತೇನೆ. ಸದರಿ ದೂರನ್ನು ನಿಪಿ-**1** ಎಂದು ಗುರುತಿಸಲಾಯಿತು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ-**1**(ಎ) ಎಂದು ಗುರುತಿಸಲಾಯಿತು.

ನಾನು ಪೋಲಿಸರ ಮುಂದೆ ಮುಂದುವರೆದ ಹೇಳಿಕೆಯನ್ನು ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).**

**ಪಾಟೀ ಸವಾಲು: ಎಪಿಪಿಯವರಿಂದ:**

ದಿನಾಂಕ: 03.05.2021 ರಂದು ನಾನು ನನ್ನ ಗದ್ದೆಯಲ್ಲಿ ಆರೋಪಿ 1 ರವರು ಕಸ ಕಡ್ಡಿಯನ್ನು ಹಾಕಿದ ವಿಚಾರವಾಗಿ ಅವರನ್ನು ಪ್ರಶ್ನಿಸಿದಾಗ 1 ರಿಂದ 4ನೇ ಆರೋಪಿಗಳು ನಾನು ನಮ್ಮ ಜಮೀನಿನಲ್ಲಿ ಕೆಲಸ ಮಾಡಬೇಕಾದರೆ ಎಲ್ಲರೂ

ಸೇರಿಕೊಂಡು ನನಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. 1 ರಿಂದ 4ನೇ ಆರೋಪಿಗಳು ನನ್ನ ತಲೆಯನ್ನು ಹಿಡಿದುಕೊಂಡು ಅಲ್ಲೇ ಇದ್ದ ತಂಗಿನ ಮರಕ್ಕೆ ಗುದ್ದಿಸಿ ಗಾಯ ಉಂಟುಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನನ್ನು ಕೆಳಗೆ ಕೆಡವಿ ಕಾಲಿನಿಂದ ತುಳಿದು ಮೈಕೈ ಮೇಲೆ ಹೊಡೆದು ನೋವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನನ್ನು ಮತ್ತು ನಮ್ಮ ವಂಶವನ್ನು ನಿರಣಾಮ ಮಾಡುತ್ತೇನೆ ಎಂದು ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಈ ಘಟನೆಗೆ ಸಂಬಂಧಿಸಿದಂತೆ ದಿಃ12.05.2021 ರಂದು ಠಾಣೆಗೆ ಹಾಜರಾಗಿ ದೂರನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿಃ 14.05.2021ರಂದು ದೂರಿಗೆ ಸಂಬಂಧಿಸಿದಂತೆ ಮುಂದುವರೆದ ಹೇಳಿಕೆಯನ್ನು ಪೊಲೀಸರಿಗೆ ಹೇಳಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಈಗ ಓದಿ ಹೇಳಲಾಗಿ ಸಾಕ್ಷಿ ಒಪ್ಪಿಕೊಳ್ಳದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು.

ಆರೋಪಿತರು ನನ್ನ ಸಂಬಂಧಿಕರ ಆದ ಕಾರಣ ಅವರಿಗೆ ಅನುಕೂಲವಾಗುವಂತೆ ಅವರೊಂದಿಗೆ ರಾಜಿ ಮಾಡಿಕೊಂಡಿರುವ ಕಾರಣ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**